ಬಸವನಗುಡಿ ವಿಧಾನ ವ್ಯಾಪ್ತಿಯಲ್ಲಿ ಪದವಿ ಕಾಲೇಜು
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 28 (20)

ಶ್ರೀ ರವಿಸುಬ್ರಹ್ಮಣ್ಯ ಎಲ್.ಎ (ಬಸವನಗುಡಿ)

ಅ) ಬಸವನಗುಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಪದವಿ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮುಂದಿನ ಶೈಕ್ಷಣಿಕ ವರ್ಷಕ್ಕೆ ಕಲೆ ಹಾಗೂ ವಾಣಿಜ್ಯ ವಿಭಾಗದ ಪದವಿ ಕಾಲೇಜುಗಳನ್ನು ಪ್ರಾರಂಭಿಸುವುದಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆ ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 3 (12)

ಶ್ರೀ ರುದ್ರೇಶ ಗೌಡ ವೈ.ಎನ್. (ಬೇಲೂರು)

ಅ) ಬೇಲೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಹಳೆಬೀಡು ಸಮುದಾಯ ಆಸ್ಪತ್ರೆ, ಸಿರ್ಲಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಉಂಡಿಗನಾಳು ಪ್ರಾಥಮಿಕ ಆರೋಗ್ಯ ಕೇಂದ್ರ, ಕಲ್ಯಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಹುದ್ದೆಗಳು ಸಂಪೂರ್ಣ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದಾಗಿ ರೋಗಿಗಳಿಗೆ ತೊಂದರೆಯಾಗಿದ್ದು, ವೈದ್ಯರ ನೇಮಕಾತಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)
ಅ) ಬಂದಿದೆ.

ಆ) ರೋಗಿಗಳಿ ಯಾವುದೇ ರೀತಿ ತೊಂದರೆಯಾಗದಂತೆ ಸಾರ್ವಜನಿಕರ ಹಿತದೃಷ್ಟಿಯಿಂದ ಅಕ್ಕ–ಪಕ್ಕದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿರುವ ವೈದ್ಯಾಧಿಕಾರಿಯನ್ನು ವಾರದಲ್ಲಿ ಮೂರು ದಿವಸ ಕರ್ತವ್ಯ ನಿರ್ವಹಿಸಲು ನಿಯೋಜಿಸಲಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರ ನೇರಳೆಗೆ, ಉಂಡಿಗನಾಳು, ಕಲ್ಯಾಡಿ ಇವುಗಳಲ್ಲಿ ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಸರ್ಕಾರದ ಆದೇಶ ಸಂಖ್ಯೆ ಆಕುಕ 458 ಹೆಚ್.ಎಸ್.ಹೆಚ್. 2012, ದಿನಾಂಕ 19–10–2012 ರಂದು ಗ್ರಾಮೀಣ ಪ್ರದೇಶದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗೆ ಸರ್ಕಾರ ಅನುಮತಿ ನೀಡಲಾಗಿದೆ.

ಮೇಮನ ಅಧ್ಯಯನ ಪೀಠದ ಚಾಲನೆ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 17 (29)

ಶ್ರೀ ಕುಲಕರ್ಣಿ ಶ್ರೀಕಾಂತ ಸುಬ್ಬರಾವ್ (ಜಮಖಂಡಿ)
ಅ) ಕರ್ನಾಟಕ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಪೀಠದಡಿ ಮೇಮನ ಅಧ್ಯಯನ ಪೀಠ ಸ್ಥಾಪನೆ ಮಾಡಲಾಗಿದೆಯೇ;

ಆ) ಅಧ್ಯಯನ ಕಾರ್ಯಕ್ಕೆ ಚಾಲನೆ ನೀಡಲು ಅಧ್ಯಕ್ಷ ಪೀಠಕ್ಕಾಗಿ ಯಾರನ್ನು ನೇಮಿಸಲಾಗಿದೆ.

ಇ) ಈ ಅಧ್ಯಯನದ ಚಾಲನೆಗಾಗಿ ಸರ್ಕಾರದಿಂದ ಮಂಜೂರಾದ ಧನಸಹಾಯದ ಮೊತ್ತವೆಷ್ಟು? (ವಿವರ ನೀಡುವುದು).